**ಆಯುಕ್ತರು**
ಕಾರ್ಮಿಕ ಆಯುಕ್ತರ ಕಛೇರಿ

ಕರ್ನಾಟಕ ಸರ್ಕಾರ
ಕಾರ್ಮಿಕ ಇಲಾಖೆ

"ಕಾರ್ಮಿಕ ಭವನ", ಐಟಿಐ ಕಾಲೇಜ್ ಕಾಂಪೌಂಡ್
ಬನ್ನೇರುಘಟ್ಟ ರಸ್ತೆ, ಬೆಂಗಳೂರು - 560 029
ದೂರವಾಣಿ: 080 2975 3078
ಇಮೇಲ್ : labour.commissioner42@gmail.com


ಸಂ: ಪಿಒಎಸ್/ಎನ್‌ಎಫ್‌ಹೆಚ್/ಸಿಆರ್-1/2023-24

ದಿನಾಂಕ:26.04.2023

## ಕಛೇರಿ ಆದೇಶ

ವಿಷಯ: ದಿನಾಂಕ 10.05.2023 ರಂದು ಕರ್ನಾಟಕ ವಿಧಾನಸಭಾ ಚುನಾವಣೆಯ ದಿನದಂದು ವೇತನ ಸಹಿತ ರಜೆ ಘೋಷಿಸುವ ಬಗ್ಗೆ.

ಉಲ್ಲೇಖ: 1. Election Commission Of India Letter No:78/EPS/2023 Dated:31-03-2023

2. Office Of the Chief Electoral Officer, Karnataka letter No:DPAR 105 CHUVISA 2023(P-1) Dated:24-04-2023

3. ಈ ಕಚೇರಿಯ ಸುತ್ತೋಲೆ ದಿನಾಂಕ:26-04-2023

= = =

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಭಾರತ ಚುನಾವಣಾ ಆಯೋಗವು ದಿನಾಂಕ: **10.05.2023** ರ ಬುಧವಾರದಂದು ಕರ್ನಾಟಕ ವಿಧಾನ ಸಭೆಗೆ ಸಾರ್ವತ್ರಿಕ ಚುನಾವಣೆಯ ಪ್ರಕ್ರಿಯೆಯಲ್ಲಿ ಮತದಾನಕ್ಕಾಗಿ ನಿಗದಿಪಡಿಸಿದೆ. ಸದರಿ ದಿನದಂದು ರಾಜ್ಯಾದ್ಯಾಂತ ಎಲ್ಲಾ ಕಾರ್ಖಾನೆಗಳು, ಅಂಗಡಿಗಳು, ವಾಣಿಜ್ಯ ಸಂಸ್ಥೆಗಳು ಮತ್ತು ಇತರೆ ಸಂಸ್ಥೆಗಳಲ್ಲಿ ಕೆಲಸ ಮಾಡುವ ಕಾರ್ಮಿಕರಿಗೆ 1951ರ ಪ್ರಜಾ ಪ್ರತಿನಿಧಿ ಕಾಯ್ದೆ, ಸೆಕ್ಷನ್ 135(ಬಿ) ರಡಿ ಹಾಗೂ ಕೈಗಾರಿಕಾ ಸಂಸ್ಥೆಗಳ (ರಾಷ್ಟ್ರೀಯ ಮತ್ತು ಹಬ್ಬದ ರಜೆಗಳು) ಕಾಯ್ದೆ-1963 ಕಲಂ 3(ಎ)ರನ್ವಯ ಅರ್ಹ ಮತದಾರರಿಗೆ ವೇತನ ಸಹಿತ ರಜೆ ಘೋಷಿಸಿ ಸಂವಿಧಾನಾತ್ಮಕ ಹಕ್ಕಾದ ಮತವನ್ನು ಚಲಾಯಿಸುವುದಕ್ಕಾಗಿ ಎಲ್ಲಾ ಮಾಲೀಕರು/ನಿಯೋಜಕರು ಅನುವು ಮಾಡಿ ಕೊಡಬೇಕಾಗಿರುತ್ತದೆ. ಆದ್ದರಿಂದ, ತಮ್ಮ ಕಾರ್ಯ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಕಾರ್ಖಾನೆಗಳು, ಅಂಗಡಿಗಳು, ವಾಣಿಜ್ಯ ಸಂಸ್ಥೆಗಳು ಮತ್ತು ಇತರ ಸಂಸ್ಥೆಗಳ ಎಲ್ಲಾ ಮಾಲೀಕರು/ನಿಯೋಜಕರ ಗಮನಕ್ಕೆ ತಂದು ಕಾರ್ಮಿಕರು ಮತದಾನದಲ್ಲಿ ಪಾಲ್ಗೊಳಲು ಅನುಕೂಲವಾಗುವಂತೆ ಸಕಲ ಕ್ರಮಗಳನ್ನು ಕೈಗೊಳ್ಳಲು ಹಾಗೂ ಸರ್ಕಾರದ ಸೂಚನೆಯನ್ನು ಕಟ್ಟುನಿಟ್ಟಾಗಿ ಪಾಲಿಸುವುದು ಮತ್ತು ಕೈಗೊಂಡ ಕ್ರಮದ ಬಗ್ಗೆ ಮಾಹಿತಿಯನ್ನು ಕೇಂದ್ರ ಕಛೇರಿಗೆ ಸಲ್ಲಿಸಲು ಈ ಮೂಲಕ ಆದೇಶಿಸಿದೆ.

ಆಯುಕ್ತರು
**ಕಾರ್ಮಿಕ ಇಲಾಖೆ**

<u>ಇವರಿಗೆ,</u>

1. ಎಲ್ಲಾ ಕಾರ್ಮಿಕ ಅಧಿಕಾರಿಗಳು,
   [ತಮ್ಮ ಅಧೀನದಲ್ಲಿ ಬರುವ ಎಲ್ಲಾ ಹಿರಿಯ ಕಾರ್ಮಿಕ ನಿರೀಕ್ಷಕರು/ಕಾರ್ಮಿಕ ನಿರೀಕ್ಷಕರುಗಳಿಗೆ ಸೂಚಿಸುವುದು]

<u>ಪ್ರತಿ ಸೂಕ್ತ ಕ್ರಮಕ್ಕಾಗಿ</u>

1. ಎಲ್ಲಾ ಉಪ ಕಾರ್ಮಿಕ ಆಯುಕ್ತರು.
2. ಎಲ್ಲಾ ಸಹಾಯಕ ಕಾರ್ಮಿಕ ಆಯುಕ್ತರು.

ಪ್ರತಿ:ಸರ್ಕಾರದ ಕಾರ್ಯದರ್ಶಿಗಳು, ಕಾರ್ಮಿಕ ಇಲಾಖೆ, ವಿಕಾಸ ಸೌಧ, ಬೆಂಗಳೂರು.